# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | :802(955) |
| ಸದಸ್ಯರ ಹೆಸರು | :ಶ್ರೀ. ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : ಮಾನ್ಯ ಕಂದಾಯ ಸಚಿವರು |
| ಉತ್ತರಿಸುವ ದಿನಾಂಕ | :24.07.2024 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರಿನಲ್ಲಿರುವ ಜಿಲ್ಲಾಧಿಕಾರಿಗಳಿದ್ದ ಕಟ್ಟಡವು ಎಷ್ಟು ವರ್ಷಗಳಿಂದ ಖಾಲಿ ಬಿದ್ದಿರುತ್ತದೆ; | ಮೈಸೂರು ನಗರದ ಕೃಷ್ಣರಾಜ ಬುಲೇವಾರ್ಡ್ ರಸ್ತೆಯಲ್ಲಿರುವ ಜಿಲ್ಲಾಧಿಕಾರಿಗಳ ಕಟ್ಟಡದಲ್ಲಿನ ಜಿಲ್ಲಾಧಿಕಾರಿಗಳ ಕಛೇರಿ, ಸೇರಿದಂತೆ ಇತರೆ ಕಛೇರಿಗಳು ಮೈಸೂರು ನಗರದ ಸಿದ್ಧಾರ್ಥ ನಗರದಲ್ಲಿರುವ ಜಿಲ್ಲಾ ಮಟ್ಟದ ಕಛೇರಿಗಳ ಸಂಕೀರ್ಣ ಕಟ್ಟಡಕ್ಕೆ ಸ್ಥಳಾಂತರಗೊಂಡಿರುತ್ತವೆ. ಹಾಲಿ ಕಟ್ಟಡದಲ್ಲಿ ಉಪವಿಭಾಗಾಧಿಕಾರಿಗಳ ಕಛೇರಿ, ಮೈಸೂರು ಉಪವಿಭಾಗ ಮಾತ್ರ ಕಾರ್ಯನಿರ್ವಹಿಸುತ್ತಿದೆ. |
| ಆ) | ಈ ರೀತಿ ಪಾಳು ಬಿದ್ದಿರಲು ಕಾರಣವೇನು; | |
| ಇ) | ಮೇಲ್ಕಂಡ ಕಟ್ಟಡವನ್ನು ಕೂಡಲೇ ಮೈಸೂರು ಮ್ಯೂಸಿಯಂ ಆಗಿ ಪರಿವರ್ತಿಸಲು ಸರ್ಕಾರ ಕೈಗೊಳ್ಳುವ ಕ್ರಮವೇನು? | ಮೈಸೂರು ನಗರದ ಕೃಷ್ಣರಾಜ ಬುಲೇವಾರ್ಡ್ ರಸ್ತೆಯಲ್ಲಿರುವ ಜಿಲ್ಲಾಧಿಕಾರಿಗಳ ಪಾರಂಪರಿಕ ಕಟ್ಟಡವನ್ನು ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಗೆ ಹಸ್ತಾಂತರಿಸುವ ಬಗ್ಗೆ ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ, ಇವರಿಂದ ಸ್ವೀಕೃತವಾದ ಪ್ರಸ್ತಾವನೆಯನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ರಾಜ್ಯ ಶಿಷ್ಟಾಚಾರ) ಯಿಂದ ಆಯುಕ್ತರು, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಗೆ ಸಲ್ಲಿಸಲಾಗಿರುತ್ತದೆ. |

ಕಂಇ 79 ಡಬ್ಲ್ಯೂಬಿಆರ್ 2024

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು